ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೊಳಚೆ ಪ್ರದೇಶಗಳ ಸುಧಾರಣೆ

ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-

377 (308) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳಚೆ ಪ್ರದೇಶಗಳ ಸುಧಾರಣೆಗಾಗಿ ಸರ್ಕಾರದ ಯೋಜನಾ ಸೌಲಭ್ಯಗಳೇನು ; ಕಳೆದ ಮೂರು ವರ್ಷಗಳ ಆರ್ಥಿಕ ವರ್ಷದಲ್ಲಿ ಈ ಕುರಿತಾಗಿ ಸಾಧಿಸಿದ ಗುರಿ ಮತ್ತು ಸಾಧನೆಗಳೇನು ; (ವಿವರ ಒದಗಿಸುವುದು)

(ಆ) ಕೊಳಚೆ ಪ್ರದೇಶಗಳಿಗೆ ಮೂಲ ಸೌಲಭ್ಯಗಳು ಮತ್ತು ವಸತಿ ಸೌಲಭ್ಯವನ್ನು ಒದಗಿಸಿಕೊಡುವ ದಿಶೆಯಲ್ಲಿ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಗಳು ಮತ್ತು ಕೇಂದ್ರದಿಂದ ಪಡೆದ ಅನುದಾನ ಮೊತ್ತವೆಷ್ಟು;

(ಇ) ಕಲಬುರಗಿ, ಬೀದರ್, ಯಾದಗಿರಿ, ಕೊಪ್ಪಳ, ವಿಜಯಪುರ, ಬಾಗಲಕೋಟೆ, ಬಳ್ಳಾರಿ ಜಿಲ್ಲೆಗಳ ಪ್ರದೇಶದಲ್ಲಿನ ಕೊಳಚೆ ಪ್ರದೇಶಗಳ ಸಮಗ್ರ ಸುಧಾರಣೆಗಾಗಿ ಮತ್ತು ಕೊಳಚೆ ನಿವಾಸಿಗಳಿಗೆ ಹಕ್ಕು ಪತ್ರಗಳು, ಮನೆ ನಿರ್ಮಾಣ ಒದಗಿಸಿಕೊಡುವಲ್ಲಿ ಸರ್ಕಾರದ ನಿಲುವುಗಳೇನು?